ಕರ್ನಾಟಕ ಸರ್ಕಾರ

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560012**

ಸಂಖ್ಯೆ: ಪಪೂಶಿಇ/ಪ್ರ.ಪೀ.ಜಿ/ಅಂಕಪಟ್ಟಿ/01/2019-20 ದಿನಾಂಕ: 19.08.2019

**ಸುತ್ತೋಲೆ**

**ವಿಷಯ:** ಪ್ರವಾಹ ಪೀಡಿತ ಜಿಲ್ಲೆಗಳ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ದ್ವಿಪ್ರತಿ ಅಂಕಪಟ್ಟಿ ಮತ್ತು ಇತರೆ ಶೈಕ್ಷಣಿಕ ದಾಖಲೆಗಳನ್ನು ತ್ವರಿತವಾಗಿ ಹಾಗೂ ಶುಲ್ಕರಹಿತವಾಗಿ ನೀಡುವ ಬಗ್ಗೆ.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಪ್ರವಾಹ ಪೀಡಿತ ಜಿಲ್ಲೆಗಳಲ್ಲಿ ಪ್ರಸ್ತುತ ತೀವ್ರವಾಗಿ ಮಳೆ ಸುರಿದ ಪರಿಣಾಮವಾಗಿ ಸಾರ್ವಜನಿಕ ಆಸ್ತಿಪಾಸ್ತಿಗಳು ಮತ್ತು ಇತ್ಯಾದಿಗಳು ಹಾನಿ ಉಂಟಾಗಿರುತ್ತದೆ. ಅದರಂತೆ ಪದವಿ ಪೂರ್ವ ಶಿಕ್ಷಣ ಇಲಾಖೆಯ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ / ಮಾಡಿರುವ ವಿದ್ಯಾರ್ಥಿಗಳು ಪ್ರಥಮ ಮತ್ತು ದ್ವಿತೀಯ ಪಿಯುಸಿ ತರಗತಿಗಳ ಅಂಕಪಟ್ಟಿ ಮತ್ತು ಪಿ.ಯು.ಸಿ ಶಿಕ್ಷಣ/ವ್ಯಾಸಂಗಕ್ಕೆ ಸಂಬಂಧಿಸಿದಂತೆ ದಾಖಲೆಗಳು ಪ್ರವಾಹದಿಂದ ಹಾನಿಗೊಳಗಾಗಿದ್ದರೆ, ಅಂತಹ ವಿದ್ಯಾರ್ಥಿಗಳು ಅರ್ಜಿಯನ್ನು ನಿಯಮಾನುಸಾರ ಸಂಬಂಧಪಟ್ಟ ಕಾಲೇಜು / ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರ ಮುಖಾಂತರ ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಅರ್ಜಿ ಸಲ್ಲಿಸಿದ ತಕ್ಷಣ ಸದರಿ ವಿದ್ಯಾರ್ಥಿಗಳ ದ್ವಿಪ್ರತಿ ಅಂಕಪಟ್ಟಿ ಮತ್ತು ಇತರೆ ಪಿಯುಸಿ ಶಿಕ್ಷಣಕ್ಕೆ ಸಂಬಂಧಿಸಿದ ದಾಖಲೆಗಳನ್ನು ಶುಲ್ಕರಹಿತವಾಗಿ ಇಲಾಖೆಯಿಂದ ನೀಡಲಾಗುವುದು. ಪ್ರವಾಹ ಪೀಡಿತ ಜಿಲ್ಲೆಗಳ ಉಪನಿರ್ದೇಶಕರು, ತಮ್ಮ ಜಿಲ್ಲಾ ವ್ಯಾಪ್ತಿಗೆ ಬರುವ ಎಲ್ಲಾ ಪದವಿ ಪೂರ್ವ ಕಾಲೇಜುಗಳ ವಿದ್ಯಾರ್ಥಿಗಳಿಗೆ ಈ ಬಗ್ಗೆ ಮಾಹಿತಿ ತಲುಪುವಂತೆ ಕ್ರಮವಹಿಸಿ, ವಿದ್ಯಾರ್ಥಿಗಳು ಕಳೆದುಕೊಂಡಿರುವ ದಾಖಲೆಗಳನ್ನು ತ್ವರಿತವಾಗಿ ಪಡೆದುಕೊಳ್ಳಲು ಅನುವು ಮಾಡಿಕೊಡಲು ಸೂಚಿಸಿದೆ.

**ವಿ.ಸೂಚನೆ:**

1. ದ್ವಿಪ್ರತಿ ಅಂಕಪಟ್ಟಿ ಮತ್ತು ಇತರೆ ಪಿ.ಯು.ಸಿ ಶಿಕ್ಷಣಕ್ಕೆ ಸಂಬಂಧಿಸಿದ ದಾಖಲೆಗಳನ್ನು ಶುಲ್ಕರಹಿತವಾಗಿ ಪಡೆಯಲು ವಿದ್ಯಾರ್ಥಿಗಳು ಅಥವಾ ಪೋಷಕರು ಪದವಿ ಪೂರ್ವ ಶಿಕ್ಷಣ ಇಲಾಖೆಯ ಕೇಂದ್ರ ಕಛೇರಿಗೆ ಬೇಟಿ ನೀಡುವ ಅಗತ್ಯ ಇರುವುದಿಲ್ಲ. ಪ್ರವಾಹ ಪೀಡಿತ ಜಿಲ್ಲೆಗಳ ಉಪನಿರ್ದೇಶಕರ ಮುಖಾಂತರ ಅರ್ಜಿ ಸ್ವೀಕರಿಸಿದ ನಂತರ ಸದರಿ ದಾಖಲೆಗಳನ್ನು ವಿದ್ಯಾರ್ಥಿಗಳಿಗೆ ಸಂಬಂಧಪಟ್ಟ ಉಪನಿರ್ದೇಶಕರ ಕಛೇರಿಗೆ / ಕಾಲೇಜುಗಳಿಗೆ ತಲುಪಿಸಲಾಗುವುದು.
2. ಕೆಲವು ಶೈಕ್ಷಣಿಕ ದಾಖಲೆ ಪತ್ರಗಳನ್ನು ಜಿಲ್ಲಾ ಉಪನಿರ್ದೇಶಕರು ಅಥವಾ ಕಾಲೇಜು ಹಂತದಲ್ಲಿಯೇ ನೀಡಲು ಕ್ರಮವಹಿಸುವುದು.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

**ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ.**
**- ಇವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ**

ಪ್ರತಿಗಳು:

1. ಜಂಟಿ ನಿರ್ದೇಶಕರು (ಶೈಕ್ಷಣಿಕ) (ಪರೀಕ್ಷೆ) (ಆಡಳಿತ) ಪದವಿ ಪೂರ್ವ ಶಿಕ್ಷಣ ಇಲಾಖೆ.
2. ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಶಾಖೆಯವರಿಗೆ.